ಕರ್ನಾಟಕ ಸರ್ಕಾರ

ಕಾಲೇಜು ಶಿಕ್ಷಣ ಇಲಾಖೆ

ಸಂ:ಡಿಸಿಇ/ಟಿಆರ್‌ಎನ್/ಟಿಆರ್‌ಎನ್/20/2020-ಟಿಡಿಜಿ

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:12.11.2020

**ಸುತ್ತೋಲೆ**

ವಿಷಯ: ನೂತನವಾಗಿ ಸ್ಥಳಾಂತರಗೊಂಡ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ವರ್ಗದವರ ಸ್ಥಳನಿಯುಕ್ತಿ ಕೌನ್ಸಿಲಿಂಗ್ ಬಗ್ಗೆ.

ಉಲ್ಲೇಖ: ಸರ್ಕಾರದ ಆದೇಶ ಸಂ: ಇಡಿ 80 ಹೆಚ್‌ಪಿಸಿ 2020 ಬೆಂಗಳೂರು ದಿನಾಂಕ:18.05.2020, ದಿ:20.07.2020 ಮತ್ತು ದಿ:10.08.2020.

******

ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಯ 100ಕ್ಕಿಂತ ಕಡಿಮೆ ವಿದ್ಯಾರ್ಥಿಗಳಿರುವ ಕೆಳಕಂಡ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳನ್ನು ಉಲ್ಲೇಖಿತ ಸರ್ಕಾರದ ಆದೇಶದಲ್ಲಿ ಹೆಚ್ಚಿನ ಬೇಡಿಕೆ ಇರುವ ಸ್ಥಳಗಳಿಗೆ ಸ್ಥಳಾಂತರಿಸಿದ್ದು, ಸದರಿ ಕಾಲೇಜುಗಳಲ್ಲಿದ್ದ ಕೋರ್ಸುಗಳು ಹಾಗೂ ಬೋಧಕ, ಬೋಧಕೇತರ ಸಿಬ್ಬಂದಿಗಳನ್ನು ಹುದ್ದೆ ಸಮೇತ ವರ್ಗಾಯಿಸಿ ಆದೇಶಿಸಲಾಗಿರುತ್ತದೆ.

| ಕ್ರ. ಸಂ. | ಸಪ್ರದ ಕಾಲೇಜಿನ ಹೆಸರು | ಸ್ಥಳಾಂತರಿಸಲಾದ ಸ್ಥಳ |
|---|---|---|
| 01 | ಸಪ್ರದಕಾ ಸಾತನೂರು, ರಾಮನಗರ ಜಿಲ್ಲೆ | ಬಸವನಗುಡಿ, ಬೆಂಗಳೂರು ನಗರ |
| 02 | ಸಪ್ರದಕಾ ತೆರಕಣಾಂಬಿ, ಚಾಮರಾಜನಗರ ಜಿಲ್ಲೆ | ಹಾರೋಗೇರಿ, ಬೆಳಗಾವಿ ಜಿಲ್ಲೆ |
| 03 | ಸಪ್ರದಕಾ ತುರುವನೂರು, ಚಿತ್ರದುರ್ಗ ಜಿಲ್ಲೆ | ನಿಪ್ಪಾಣಿ, ಬೆಳಗಾವಿ ಜಿಲ್ಲೆ |
| 04 | ಸಪ್ರದಕಾ ಹಳ್ಳಿಮೈಸೂರು, ಹಾಸನ ಜಿಲ್ಲೆ | ಶಾಂತಿನಗರ, ಬೆಂಗಳೂರು ನಗರ |
| 05 | ಸಪ್ರದಕಾ ಅರೇಹಳ್ಳಿ, ಹಾಸನ ಜಿಲ್ಲೆ | ಟಿ.ದಾಸರಹಳ್ಳಿ, ಬೆಂಗಳೂರು ನಗರ |

ಆದರೆ ಸ್ಥಳಾಂತರಗೊಂಡ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಹಲವು ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ವರ್ಗದವರು ಸ್ಥಳಾಂತರಗೊಂಡ ಸ್ಥಳಗಳಲ್ಲಿ ಕರ್ತವ್ಯ ನಿರ್ವಹಿಸಲು ಇಚ್ಛಿಸದ ಪ್ರಯುಕ್ತ ಅಂತಹ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ವರ್ಗದವರಿಗೆ ಒಂದು ಬಾರಿಯ ಕ್ರಮವಾಗಿ ವಿಶೇಷ ಪ್ರಕರಣವೆಂದು ಪರಿಗಣಿಸಿ, ಸ್ಥಳಾಂತರಗೊಳ್ಳುವ ಪೂರ್ವದಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಕಾಲೇಜಿನ ವಲಯದಲ್ಲಿ ಲಭ್ಯವಿರುವ ಖಾಲಿ ಹುದ್ದೆಗಳಗೆದುರಾಗಿ ಕೌನ್ಸಿಲಿಂಗ್ ಮೂಲಕ ಸ್ಥಳನಿಯುಕ್ತಿಗೊಳಿಸಲು ಸಮ ಸಂಖ್ಯೆಯ ಕಡತದಲ್ಲಿ ಸರ್ಕಾರವು ಅನುಮೋದನೆ ನೀಡಿರುತ್ತದೆ.

ಪ್ರಯುಕ್ತ ಸ್ಥಳಾಂತರಗೊಂಡ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸಲು ಇಚ್ಛಿಸದ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ವರ್ಗದವರಿಗೆ ಒಂದು ಬಾರಿಯ ಕ್ರಮವಾಗಿ ವಿಶೇಷ ಪ್ರಕರಣವೆಂದು ಪರಿಗಣಿಸಿ, ಸ್ಥಳಾಂತರಗೊಳ್ಳುವ ಪೂರ್ವದಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಕಾಲೇಜಿನ ವಲಯದಲ್ಲಿ ಲಭ್ಯವಿರುವ ಖಾಲಿ ಹುದ್ದೆಗಳಗೆದುರಾಗಿ ದಿನಾಂಕ:13.11.2020ರಂದು ಅಪರಾಹ್ನ 3.00 ಗಂಟೆಗೆ ಕಾಲೇಜು ಶಿಕ್ಷಣ ಆಯುಕ್ತಾಲಯದಲ್ಲಿ ಸ್ಥಳನಿಯುಕ್ತಿ ಕೌನ್ಸಿಲಿಂಗ್‌ನ್ನು ನಿಗದಿಪಡಿಸಲಾಗಿದೆ. ಸ್ಥಳಾಂತರಗೊಂಡ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸಲು ಇಚ್ಛಿಸದ ಬೋಧಕ ಮತ್ತು ಬೋಧಕೇತರರು ಕಡ್ಡಾಯವಾಗಿ ಕೌನ್ಸಿಲಿಂಗ್‌ಗೆ ಹಾಜರಾಗುವಂತೆ ಸೂಚಿಸಲಾಗಿದೆ.

ಸೂಚನೆ: ಕೌನ್ಸಿಲಿಂಗ್‌ಗೆ ಗೈರು ಹಾಜರಾದವರನ್ನು ಸ್ಥಳಾಂತರಗೊಂಡ ಕಾಲೇಜಿನಲ್ಲಿ ಕರ್ತವ್ಯ ನಿರ್ವಹಿಸಲು ಇಚ್ಛಿಸಿರುತ್ತಾರೆಂದು ಪರಿಗಣಿಸಲಾಗುವುದು.

*(ಮಾನ್ಯ ಆಯುಕ್ತರ ಆದೇಶದ ಮೇರೆಗೆ)*

ನಿರ್ದೇಶಕರು
ಕಾಲೇಜು ಶಿಕ್ಷಣ ಇಲಾಖೆ

ಇವರಿಗೆ

1) ಮೇಲ್ಕಂಡ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಮಾಹಿತಿ ಮತ್ತು ಅಗತ್ಯಕ್ರಮಕ್ಕಾಗಿ.
2) ಮೇಲ್ಕಂಡ ಕಾಲೇಜುಗಳ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ವರ್ಗದವರಿಗೆ – ಮಾಹಿತಿ ಮತ್ತು ಅಗತ್ಯ ಕ್ರಮಕ್ಕಾಗಿ.
3) ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಮಾಹಿತಿ ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು – ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಕೋರಿದೆ.
4) ಕಛೇರಿ ಪ್ರತಿ